# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 669
ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ಸಚಿವರು : ಕಂದಾಯ ಸಚಿವರು
ಉತ್ತರಿಸುವ ದಿನಾಂಕ : 12.07.2023

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ.</td><td>ರಾಜ್ಯದಲ್ಲಿರುವ ಆರ್.ಆರ್.ಟಿ. ಶಾಖೆಯಲ್ಲಿ ಅರ್ಜಿಗಳ ಸಂಖ್ಯೆ ಎಷ್ಟು;</td><td>ರಾಜ್ಯದಲ್ಲಿನ ಆರ್.ಆರ್.ಟಿ. ಶಾಖೆಗಳಲ್ಲಿ ಒಟ್ಟು 78609 ಅರ್ಜಿಗಳು ಬಾಕಿ ಇರುತ್ತವೆ.</td></tr>
<tr><td>ಆ.</td><td>ಆರ್.ಆರ್.ಟಿ. ಶಾಖೆಯಲ್ಲಿ ಅರ್ಜಿಗಳ ವಿಲೇವಾರಿ ತೀರಾ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td rowspan="3">ಆರ್.ಆರ್.ಟಿ. ಶಾಖೆಯಲ್ಲಿ ಅರ್ಜಿಗಳ ವಿಲೇವಾರಿ ತೀರಾ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುವ ಹಿನ್ನೆಲೆಯಲ್ಲಿ, ಸರ್ಕಾರದ ಆದೇಶ ಸಂಖ್ಯೆ:ಕಂಇ 25 ಎಂಆರ್ಆರ್ 2023, ದಿನಾಂಕ:31.01.2023ರಲ್ಲಿ ರಾಜ್ಯಾದ್ಯಂತ ಎಲ್ಲಾ ತಾಲ್ಲೂಕುಗಳ ಗ್ರಾಮ ಆಡಳಿತಾಧಿಕಾರಿಗಳ ವೃತ್ತ ಮಟ್ಟದಲ್ಲಿ ಕಂದಾಯ ಅದಾಲತ್‌ಗಳನ್ನು ನಡೆಸಿ ಪಹಣಿಗಳ ಲೋಪದೋಷಗಳನ್ನು ಸರಿಪಡಿಸುವ ಕಾರ್ಯಕ್ರಮವನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸುವ ಸಲುವಾಗಿ ಪಹಣಿ ತಿದ್ದುಪಡಿ ಅಧಿಕಾರವನ್ನು ತಹಶೀಲ್ದಾರ್‌ರವರಿಗೆ ಪ್ರತ್ಯಾಯೋಜಿಸಿ ಆದೇಶಿಸಲಾಗಿದೆ. ಅದರಂತೆ ಅರ್ಜಿಗಳನ್ನು ಶೀಘ್ರವಾಗಿ ವಿಲೇವಾರಿ ಮಾಡಲು ಕ್ರಮಕೈಗೊಳ್ಳಲಾಗುತ್ತಿದೆ.</td></tr>
<tr><td>ಇ.</td><td>ಇದರಿಂದಾಗಿ ರೈತರಿಗೆ ತುಂಬಾ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td></tr>
<tr><td>ಈ.</td><td>ಸದರಿ ಅರ್ಜಿಗಳನ್ನು ತ್ವರಿತವಾಗಿ ವಿಲೇವಾರಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;</td></tr>
<tr><td>ಉ.</td><td>ರಾಜ್ಯದಲ್ಲಿ ಪೋಡಿ ಸಂಬಂಧ ಬಂದಿರುವ ಅರ್ಜಿಗಳು, ವಿಲೇವಾರಿಯಾದ ಅರ್ಜಿಗಳು ಹಾಗೂ ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು; ವಿಳಂಬಕ್ಕೆ ಕಾರಣಗಳೇನು;</td><td>ರಾಜ್ಯದಲ್ಲಿ 01.07.2021 ರಿಂದ 30.06.2023ರ ಅವಧಿಯಲ್ಲಿ ಪೋಡಿ ಸಂಬಂಧ ಸ್ವೀಕೃತವಾದ, ವಿಲೇವಾರಿಯಾದ ಮತ್ತು ಬಾಕಿ ಇರುವ ಅರ್ಜಿಗಳ ವಿವರಗಳು ಕೆಳಕಂಡಂತಿವೆ:
<table>
<tr><th>ಪ್ರಾ. ಶಿಲ್ಕು</th><th>ಸ್ವೀಕೃತಿ</th><th>ಒಟ್ಟು</th><th>ವಿಲೇ</th><th>ಬಾಕಿ</th><th>ಕಂದಾಯ ಶಾಖೆಯಲ್ಲಿ ಬಾಕಿ</th><th>ಭೂಮಾಪನ ಶಾಖೆಯಲ್ಲಿ ಬಾಕಿ</th></tr>
<tr><td>108031</td><td>282109</td><td>390140</td><td>265864</td><td>124276</td><td>64950</td><td>59326</td></tr>
</table>
ಈ ಕೆಳಕಂಡ ಕಾರಣಗಳಿಂದಾಗಿ ಪೋಡಿ ಪ್ರಕರಣಗಳ ವಿಲೇವಾರಿಯಲ್ಲಿ ವಿಳಂಬವಾಗುತ್ತಿದೆ:-<br>
1. ಆಕಾರ ಬಂದು & ಪಹಣಿ ವಿಸ್ತೀರ್ಣದಲ್ಲಿ ವ್ಯತ್ಯಾಸಗಳಿರುವುದು.<br>
2. ಪಹಣಿ ಕಾಲಂ 3 & 9 ರಲ್ಲಿ ವಿಸ್ತೀರ್ಣದ ವ್ಯತ್ಯಾಸಗಳಿರುವುದು.<br>
3. ಪಹಣಿ ತಿದ್ದುಪಡಿ ಮಾಡಲು ಅವಶ್ಯಕವಾದ ಹಿಂದಿನ ಕಂದಾಯ ದಾಖಲೆಗಳು (ಮ್ಯುಟೇಷನ್, ಪಹಣಿ, ಮಂಜೂರಿ ಆದೇಶ-ಇತರೆ) ಲಭ್ಯವಾಗದಿರುವುದು.<br>
4. ಭೂಮಂಜೂರಾತಿ ಪ್ರಕರಣಗಳಲ್ಲಿ ಸರ್ಕಾರದ ಸೂಚನೆಗಳ ನ್ವಯ ನಮೂನೆ 1 ರಿಂದ 5 ಭರ್ತಿ ಮಾಡುವಲ್ಲಿ ಮಂಜೂರಾತಿ ದಾಖಲೆ ಲಭ್ಯವಾಗದೇ ಇರುವುದು.<br>
5. ಭೂಮಂಜೂರಾತಿ ಪ್ರಕರಣಗಳಲ್ಲಿ ಮಂಜೂರಿ ಮತ್ತು ಅನುಭವ ವಿಸ್ತೀರ್ಣಗಳಲ್ಲಿ ವ್ಯತ್ಯಾಸ ಇರುವುದು.<br>
6. ಜಮೀನಿನ ಆಕಾರ ಬಂದಿನ ವಿಸ್ತೀರ್ಣಕ್ಕಿಂತ ಹೆಚ್ಚಿನ ಕ್ಷೇತ್ರಕ್ಕೆ ಮಂಜೂರಿ ಆದೇಶ ಮಾಡಿರುವುದರಿಂದ ಪಹಣಿ ಸರಿಪಡಿಸುವಲ್ಲಿ ತೊಂದರೆ ಇರುವುದು.<br>
7. ಜಮೀನಿನ ಮೂಲ ಭೂದಾಖಲೆಗಳು/ಕಂದಾಯ ದಾಖಲೆಗಳು ಶಿಥಿಲವಾಗಿದ್ದು, ಅವುಗಳ ಪುನರ್ ನಿರ್ಮಾಣ ಮಾಡಲು ಹೆಚ್ಚಿನ ಕಾಲಾವಕಾಶ</td></tr>
</table>

| | | |
|---|---|---|
| | | ಅವಶ್ಯವಿರುವುದು.<br>8. ಅಳತೆ ವೇಳೆ ಜಮೀನಿನ ಹಕ್ಕು ಮತ್ತು ಗಡಿ ವಿಚಾರದಲ್ಲಿ ತಕರಾರು ಮತ್ತು ನ್ಯಾಯಾಲಯದಲ್ಲಿ ವಿವಾದಗಳಿರುವುದು.<br>9. ಸರ್ಕಾರಿ/ಪರವಾನಗಿ ಭೂಮಾಪಕರಿಗೆ ಪ್ರತಿ ಮಾಹೆ ನಿಗಧಿತ ಗುರಿಯಂತೆ ಕೆಲಸ ನಿರ್ವಹಿಸುತ್ತಿದ್ದು ಗುರಿಗಿಂತ ಹೆಚ್ಚಿನ ಅರ್ಜಿಗಳು ಸ್ವೀಕೃತಿಯಾಗುತ್ತಿರುವುದು. |
| ಊ. | ತುರ್ತಾಗಿ ವಿಲೇವಾರಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಪೋಡಿ ಅರ್ಜಿಗಳ ತ್ವರಿತ ವಿಲೇವಾರಿಗಾಗಿ ಕೆಳಕಂಡಂತೆ ಕ್ರಮ ಕೈಗೊಳ್ಳಲಾಗಿದೆ:<br>1. ಪೋಡಿ ಅರ್ಜಿಗಳ ತ್ವರಿತ ವಿಲೇವಾರಿಗಾಗಿ ಇಲಾಖೆಯಲ್ಲಿ ಅಳತೆ ಕೋರಿ ಸ್ವೀಕೃತವಾಗುವ ಎಲ್ಲಾ ಅರ್ಜಿಗಳನ್ನು ಮೋಜಿಣಿ ತಂತ್ರಾಂಶದ ಮುಖಾಂತರ ಆನ್ ಲೈನ್ ನಲ್ಲಿ ಸ್ವೀಕರಿಸಲಾಗುತ್ತಿದ್ದು, ತಂತ್ರಾಂಶದ ಪ್ರತಿ ಹಂತದಲ್ಲಿಯೂ FIFO (ಸರದಿ ಸಾಲಿನಂತೆ) ಅಳವಡಿಸಲಾಗಿದೆ. ಆನ್‌ಲೈನ್ ಮೂಲಕವೇ ಭೂ ಮಾಪಕರುಗಳಿಗೆ ಅಳತೆಗಾಗಿ ಹಂಚಿಕೆ ಮಾಡಲಾಗುತ್ತಿದೆ. ಪ್ರಕರಣದಲ್ಲಿ ಅಳತೆಯಾದ ನಂತರ ಸರದಿ ಸಾಲಿನಂತೆ ಆನ್ ಲೈನ್ ನಲ್ಲಿ ಅಪ್‌ಲೋಡ್ ಮಾಡಿ ಅನುಮೋದನೆಯನ್ನು ಸಹಾ ತಂತ್ರಾಂಶದ ಮುಖಾಂತರ ಆನ್ ಲೈನ್ ನಲ್ಲೇ ನೀಡಲಾಗುತ್ತಿದೆ.<br>2. ಕಂದಾಯ ಇಲಾಖೆಯಿಂದ ಪಹಣಿ ತಿದ್ದುಪಡಿ ಕುರಿತು ಕಂದಾಯ ಅದಾಲತ್ ಗಳನ್ನು ನಡೆಸಲಾಗುತ್ತಿದೆ.<br>3. ಕಂದಾಯ ಇಲಾಖೆಯ ಅಭಿಲೇಖಾಲಯದ ಎಲ್ಲಾ ಮಂಜೂರಿ ಸಂಬಂಧಿಸಿದ ಕಡತಗಳನ್ನು Cateloging and Indexing ಮಾಡಲು ಸೂಚಿಸಲಾಗಿದೆ.<br>4. ಪಹಣಿಯಲ್ಲಿ ಮಾಲೀಕರ ಹೆಸರು/ಪೌತಿ ಖಾತೆ ಇತ್ಯಾದಿಗಳ ಕುರಿತಂತೆ ತಿದ್ದುಪಡಿ ಮಾಡುವ ಸಂಬಂಧ ಕಂದಾಯ ಅದಾಲತ್‌ಗಳನ್ನು ನಡೆಸಲಾಗುತ್ತಿದೆ.<br>5. ನಮೂನೆ 1 ರಿಂದ 5 ಅನ್ನು ಭರ್ತಿ ಮಾಡಲು ಅಗತ್ಯ ಸೂಚನೆ ಮತ್ತು ಮಾರ್ಗಸೂಚಿಗಳನ್ನು ನೀಡ ಲಾಗಿದೆ.<br>6. ವಿಡಿಯೋ ಸಂವಾದ ಮತ್ತು ವಿಭಾಗವಾರು ಅಧಿಕಾರಿಗಳ ಸಭೆ ನಡೆಸಿ ಪ್ರಗತಿ ಪರಿಶೀಲನೆ ಮಾಡಿ ಹೆಚ್ಚಿನ ಪ್ರಗತಿ ಸಾಧಿಸಲು ಸೂಕ್ತ ಮಾರ್ಗದರ್ಶನ ಮತ್ತು ಅಗತ್ಯ ಸೂಚನೆ ನೀಡಲಾಗು ತ್ತಿದೆ.<br>7. ಹೆಚ್ಚಿನ ಪ್ರಕರಣಗಳು ಬಾಕಿ ಇರುವ ತಾಲ್ಲೂಕುಗಳಿಗೆ ಕಡಿಮೆ ಪ್ರಕರಣಗಳು ಬಾಕಿ ಇರುವ ತಾಲ್ಲೂಕಿನಿಂದ ಭೂಮಾಪಕರನ್ನು ನಿಯೋಜನೆ ಮಾಡಿ ಪ್ರಕರಣಗಳನ್ನು ವಿಲೇಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |

ಸಂಖ್ಯೆ:ಕಂಇ 104 ಟಿಆರ್‌ಎಂ 2023+

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು